# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಪಶ್ಚಿಮ ವಲಯ, ಶ್ರೀರಾಮಮಂದಿರ ಉಪವಿಭಾಗ

### ವಾರ್ಡ್ ನಂ.98 : ಪ್ರಕಾಶ್ ನಗರ

**ದಿನಾಂಕ: 07.11.2020 ರಂದು ಮಧ್ಯಾಹ್ನ 3.00 ಗಂಟೆಗೆ ಶ್ರೀ ಕಾಂತರಾಜು, ನೋಡಲ್ ಅಧಿಕಾರಿ, ವಾರ್ಡ್ 98 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು, ವಾರ್ಡ್ 98ರ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

1 ನೋಡಲ್ ಅಧಿಕಾರಿ–ವಾರ್ಡ್ ನಂ.98
2 ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 98
3 ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.98
4 ಸಹಾಯಕ ಅಭಿಯಂರರು, ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆರವರು
5 ಕಂದಾಯ ಇಲಾಖೆ ಮೌಲ್ಯ ಮಾಪಕರ
6 ಬೆಸ್ಕಾಂ ಕಿರಿಯ ಅಭಿಯಂತರರು
7 ಅಧ್ಯಕ್ಷರು, ಇಂಡಿಯನ್ ಸೋಷಿಯಲ್ ವೆಲ್ಫೇರ್ ಆಸೋಸಿಯೇಷನ್, (ಸ್ಥಳೀಯ ನಾಗರೀಕರ ಕಲ್ಯಾಣ ಸಂಘ)
8 ಅಧ್ಯಕ್ಷರು, ಬಿ.ಜಿ.ಎಸ್.ಚಾರಿಟಬಲ್ ಟ್ರಸ್ಟ್, (ಸ್ಥಳೀಯ ನಾಗರೀಕರ ಕಲ್ಯಾಣ ಸಂಘ)

**: ಚರ್ಚೆಯಾದ ವಿಷಯಗಳು :**

1. ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚುತ್ತಿರುವ ಬಗ್ಗೆ
2. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ರ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ
3. ನೋಡಲ್ ಅಧಿಕಾರಿ ರವರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

**:ನಡಾವಳಿಯ ವರದಿ:**

➤ ಕಾರ್ಯದರ್ಶಿಗಳಾದ ಶ್ರೀ ಮಂಜುನಾಥ್ ಡಿ ಎಸ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

➤ ಶ್ರೀ ಕಾಂತರಾಜು ಆರ್, ನೋಡಲ್ ಅಧಿಕಾರಿ–ವಾರ್ಡ್ ನಂ.98 ರವರು ಮಾತಾನಾಡಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಮುಂದಿನ ಸಭೆಗಳಲ್ಲಿ ಸಾರ್ವಜನಿಕರು ಪಾಲ್ಗೊಳ್ಳಲಿದ್ದು, ಅವರ ಕುಂದು–ಕೊರತೆಗಳನ್ನು ಬಗೆಹರಿಸಲು ಅಗತ್ಯ ದಾಖಲೆಗಳೊಂದಿಗೆ ಸಿದ್ದರಿರಲು ಸೂಚಿಸಿದರು.

➤ ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ 98ರವರು ಮಾತಾನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ದಿನವು ಕೋವಿಡ್–19 ರ್‍ಯಾಪಿಡ್ ಟೆಸ್ಟ್ ನಡೆಯುತ್ತಿದ್ದು, ಕೆಲವು ಕಿಡಿಗೇಡಿಗಳು ಟೆಸ್ಟ್ ನಡೆಸುವ ಸ್ಥಳಗಳಲ್ಲಿ ವಿನಾಕಾರಣ ಗಲಾಟೆ ಮಾಡುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಕೋವಿಡ್–ಟೆಸ್ಟ್ ಕಾರ್ಯಕ್ಕೆ ತೊಂದರೆಯಾಗದಂತೆ ಸೂಕ್ತ ಪೋಲೀಸ್ ಭದ್ರತೆ ಒದಗಿಸಿಕೊಡಲು ಕೋರಿದರು.

- ಇದಕ್ಕೆ ಇದಕ್ಕೆ ಪ್ರತಿಕ್ರಿಯಿಸಿದ ಶ್ರೀ ಕಾಂತರಾಜು ಆರ್, ರವರು ಆರಕ್ಷಕ ಅಧಿಕಾರಿಗಳೊಂದಿಗೆ ಚರ್ಚಿಸಿ ಕೋವಿಡ್-19 ತಪಾಸಣೆ ಕಾರ್ಯ ನಡೆಯುವ ಸ್ಥಳದಲ್ಲಿ ಪೋಲೀಸ್ ಸಿಬ್ಬಂದಿಯನ್ನು ನಿಯೋಜಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

➢ ಶ್ರೀ ಕಾಂತರಾಜು, ನೋಡಲ್ ಅಧಿಕಾರಿ-ವಾರ್ಡ್ ನಂ.98, ರವರು ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಬಗ್ಗೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪರೀಕ್ಷೆ ನಡೆಸಲು ಸೂಚಿಸಿದರು ಹಾಗೂ ಮಾಸ್ಕ್ ಧರಿಸುವ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಧ್ವನಿವರ್ಧಕಗಳಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸೂಚಿಸಿದರು.

- ಇದಕ್ಕೆ ಪ್ರತಿಕ್ರಿಯಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ಸಾರ್ವಜನಿಕರಿಗೆ ಸ್ವಯಂಪ್ರೇರಿತರಾಗಿ ಟೆಸ್ಟ್ ಗಳಲ್ಲಿ ಪಾಲ್ಗೊಳಲು ಅರಿವು ಮೂಡಿಸಲಾಗಿದೆ. ದಿನಕ್ಕೆ ಸುಮಾರು ಜನರನ್ನು ಪರೀಕ್ಷೆಗೊಳಪಡಿಸುತ್ತಿದ್ದು, 3-4 ವ್ಯಕ್ತಿಗಳಲ್ಲಿ ಪಾಸಿಟಿವ್ ಪ್ರಕರಣಗಳು ಕಂಡುಬರುತ್ತಿದ್ದು, ಪಾಸಿಟಿವ್ ಪ್ರಕರಣಗಳಲ್ಲಿ ಗಣನೀಯವಾದ ಇಳಿಕೆ ಕಂಡುಬಂದಿರುತ್ತದೆ. ಇಳಿಕೆಯಾಗುತ್ತಿದೆ ಎಂದು ಉದಾಸೀನ ಮಾಡದೇ ವಾರ್ಡಿನ ಮುಖ್ಯಪ್ರದೇಶಗಳಲ್ಲಿ ಮಾರ್ಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ. ಮಾಸ್ಕ್ ಧರಿಸಲು ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಸಾರ್ವಜನಿಕರಲ್ಲಿ ಮನವೊಲಿಸುವ ಕಾರ್ಯವನ್ನು ಸಹ ಮಾಡಲಾಗುತ್ತಿದೆ ಎಂದು ತಿಳಿಸಿದರು.

➢ ಶ್ರೀ ಕಾಂತರಾಜು, ನೋಡಲ್ ಅಧಿಕಾರಿ-ವಾರ್ಡ್ ನಂ.98 ರವರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ತೆಗೆದುಕೊಂಡ ಕ್ರಮಗಳ ಬಗ್ಗೆ ಹಾಗೂ ಪ್ರಗತಿಯ ಬಗ್ಗೆ ತಿಳಿಸಲು ಸೂಚಿಸಿದರು.

- ಇದಕ್ಕೆ ಪ್ರತಿಕ್ರಿಯಿಸಿದ ಶ್ರೀ ಮಂಜುನಾಥ್ ಡಿ ಎಸ್, ಸಹಾಯಕ ಅಭಿಯಂತರರು, ವಾರ್ಡ್ 98 ರವರು ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿ ಶೇಕಡ 90ರಷ್ಟು ರಸ್ತೆ ಗುಂಡಿಗಳನ್ನು ಮುಚ್ಚಲಾಗಿದ್ದು, ಇನ್ನುಳಿದ ರಸ್ತೆ ಗುಂಡಿಗಳಿಗೆ ವೆಟ್ ಮಿಕ್ಸ್ ಹಾಕುವ ಕಾರ್ಯ ಪ್ರಗತಿಯಲ್ಲಿರುತ್ತದೆ ಎಂದು ತಿಳಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ 98ರ ಅಭಿವೃದ್ಧಿಗೆ ಸಹಕರಿಸಲು ಎಲ್ಲರೂ ಒಗ್ಗಟ್ಟಾಗಿ ಕೈಜೋಡಿಸಲು ಕೋರಿದರು. ವಾರ್ಡ್ ವ್ಯಾಪ್ತಿಯಲ್ಲಿನ ಕುಂದುಕೊರತೆಗಳನ್ನು ತಿಳಿಸಲು ಸಾರ್ವಜನಿಕರು ಸಹ ವಾರ್ಡ್ ಸಮಿತಿ ಸಭೆಯಲ್ಲಿ ಪಾಲ್ಗೊಳ್ಳುವುದು ಅವಶ್ಯಕವಿದ್ದು, ಸಭೆಯಲ್ಲಿ ಕುಂದು ಕೊರತೆಗಳನ್ನು ತಿಳಿಸಿದರೆ ಸಮಸ್ಯೆಗಳನ್ನು ಪರಿಹರಿಸಲು ಸಹಾಯವಾಗುತ್ತದೆ ಎಂದು ಅಭಿಪ್ರಾಯಿಸಿ ಮುಂದಿನ ಸಭೆಯಲ್ಲಿ ಕುಂದುಕೊರತೆಗಳನ್ನು ತಿಳಿಸಲು ಸಾರ್ವಜನಿಕರ ಪ್ರತಿನಿಧಿಯಾಗಿ ಸ್ಥಳೀಯ ನಾಗರೀಕರನ್ನು ಸಭೆಗೆ ಆಹ್ವಾನಿಸಲು ಸೂಚಿಸಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ಡಿ ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ-ವಾರ್ಡ್ 98 ಹಾಗೂ**
**ಸಹಾಯಕ ಅಭಿಯಂತರರು,**

(ಕೆ. ನಿ. ಕಾಂತರಾಜು) 07/11/2020
**ನೋಡಲ್ ಅಧಿಕಾರಿ ವಾರ್ಡ್-98**

ಪ್ರತಿಯನ್ನು:
1) ಜಂಟಿ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ರಾಜಾಜಿನಗರ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ಶ್ರೀರಾಮಮಂದಿರ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.98 ರವರ ಮಾಹಿತಿಗಾಗಿ

5) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
7) ಪೋಲೀಸ್ ಸಬ್ ಇನ್ಸ್‌ಪೆಕ್ಟರ್ ರಾಜಾಜಿನಗರ ಪೋಲೀಸ್ ಠಾಣೆ ರವರ ಮಾಹಿತಿಗಾಗಿ
8) ಕಛೇರಿ ಕಡತಕ್ಕೆ